# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಎಸ್.ಸಿ.ಎಸ್.ಪಿ. / ಟಿ.ಎಸ್.ಪಿ.. ಯೋಜನೆಯ ಪ್ರಗತಿ ಪರಿಶೀಲನೆಯ ಬಗ್ಗೆ.

ಓದಲಾಗಿದೆ: ಸರ್ಕಾರದ ಕಾರ್ಯದರ್ಶಿಯವರ ಅಧ್ಯಕ್ಷತೆಯಲ್ಲಿ ನಡೆದ ಎಂ.ಎಂ.ಆರ್. ಸಭೆಯ ನಡವಳಿ ದಿನಾಂಕ: 18-01-2017.

ಪ್ರಸ್ತಾವನೆ:-

ಮೇಲೆ ಓದಲಾದ ದಿನಾಂಕ: 18-01-2017ರ ಸರ್ಕಾರದ ಕಾರ್ಯದರ್ಶಿಗಳು, ಸಮಾಜ ಕಲ್ಯಾಣ ಇಲಾಖೆ ಇವರ ಅಧ್ಯಕ್ಷತೆಯಲ್ಲಿ ನಡೆದ ಎಂ.ಎಂ.ಆರ್. ಸಭೆಯ ನಡವಳಿಯಲ್ಲಿ (ಕ್ರಮ ಸಂಖ್ಯೆ: 17ರಲ್ಲಿ) ಸರ್ಕಾರದ ಕಾರ್ಯದರ್ಶಿಯವರು ಎಸ್.ಸಿ.ಎಸ್.ಪಿ. / ಟಿ.ಎಸ್.ಪಿ.ಗೆ ಸಂಬಂಧಿಸಿದ ಯೋಜನೆಗಳ ಬಗ್ಗೆ ಪ್ರತಿ ತಿಂಗಳು 15ಕ್ಕೆ ಅಥವಾ ಕರ್ತವ್ಯದ ದಿನದಂದು ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಮುಖ್ಯಕಾರ್ಯನಿರ್ವಹಕಾಧಿಕಾರಿಗಳು, ಜಿಲ್ಲಾ ಪಂಚಾಯತ್ ಹಾಗೂ ಇತರೆ ಇಲಾಖೆಯ ಎಲ್ಲಾ ಅಧಿಕಾರಿಗಳನ್ನೊಳಗೊಂಡಂತೆ ಸಭೆ ನಡೆಸಿ, ಕಾರ್ಯಕ್ರಮಗಳ ಅನುಷ್ಠಾನ, ಪ್ರಗತಿ ಮತ್ತು ಶೀಘ್ರವಾಗಿ ಕಾರ್ಯಕ್ರಮಗಳನ್ನು ಕೈಗೊಳ್ಳುವುದಕ್ಕೆ ಸಂಬಂಧಿಸಿದಂತೆ ಚರ್ಚಿಸಲು ತಿಳಿಸಿರುತ್ತಾರೆ. ಒಂದು ವೇಳೆ ಈ ನಿರ್ದೇಶನವನ್ನು ಉಲ್ಲಂಘಿಸಿದ್ದಲ್ಲಿ, ಅಪರಾಧ ಮಾಡಿದಂತೆ ಭಾವಿಸಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡ ಉಪಯೋಜನೆ ಕಾಯ್ದೆ 2013 ರಂತೆ ಹಾಗೂ ಪಿ.ಓ.ಎ. ಆಕ್ಟ್ ಸೆಕ್ಷನ್-3 ರಡಿ ಶಿಸ್ತು ಕ್ರಮ ಕೈಗೊಳ್ಳಲು ಸಿ.ಆ.ಸು.ಇಲಾಖೆಗೆ ಶಿಫಾರಸ್ಸು ಮಾಡಲಾಗುವುದೆಂದು ನಿರ್ಣಯ ಕೈಗೊಳ್ಳಲಾಗಿದೆ. ಸದರಿ ನಿರ್ಣಯದಂತೆ ಈ ಕೆಳಕಂಡ ಆದೇಶ.

ಸರ್ಕಾರಿ ಆದೇಶ ಸಂಖ್ಯೆ:ಸಕಇ 31 ಎಸ್‌ಎಲ್‌ಪಿ 2017, ಬೆಂಗಳೂರು ದಿನಾಂಕ: 02-02-2017

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ ಎಸ್.ಸಿ.ಎಸ್.ಪಿ. / ಟಿ.ಎಸ್.ಪಿ. ಗೆ ಸಂಬಂಧಿಸಿದ ಯೋಜನೆಗಳು / ಕಾರ್ಯಕ್ರಮಗಳ ಅನುಷ್ಠಾನ, ಪ್ರಗತಿ, ಮತ್ತು ಶೀಘ್ರವಾಗಿ ಕಾರ್ಯಕ್ರಮಗಳನ್ನು ಕೈಗೊಳ್ಳುವುದಕ್ಕಾಗಿ ಈ ಕೆಳಕಂಡ ಷರತ್ತಿಗೊಳ್ಪಟ್ಟು ಜಿಲ್ಲಾಧಿಕಾರಿಗಳ ನೇತೃತ್ವದಲ್ಲಿ ಪ್ರಗತಿ ಪರಿಶೀಲನಾ ಸಭೆಯನ್ನು ಕರೆಯಲು ಆದೇಶಿಸಿದೆ.

ಷರತ್ತುಗಳು:-

1) ಪ್ರತಿ ಮಾಹೆಯ 15ನೇ ತಾರೀಖಿನಂದು ಅಥವಾ ನಂತರದ ಕರ್ತವ್ಯದ ದಿನದಂದೂ ಸಭೆ ಕರೆಯುವುದು
2) ಜಿಲ್ಲಾಧಿಕಾರಿಗಳ ನೇತೃತ್ವದಲ್ಲಿ ಮುಖ್ಯಕಾರ್ಯನಿರ್ವಾಹಕಾಧಿಕಾರಿಗಳನ್ನೊಳಗೊಂಡಂತೆ ಎಸ್.ಸಿ.ಎಸ್.ಪಿ. / ಟಿ.ಎಸ್.ಪಿ. ಸಂಬಂಧಿಸಿದ ಎಲ್ಲಾ ಇಲಾಖೆಗಳ ಅಲ್ಲಿಯ ಅಧಿಕಾರಿಗಳನ್ನು ಕಡ್ಡಾಯವಾಗಿ ಆಹ್ವಾನಿಸತಕ್ಕದ್ದು.
3) ಸದರಿ ಸಭೆಗೆ ಹಾಜರಾಗದ ಹಾಗೂ ಸಭೆಯ ನಿರ್ಣಯದಂತೆ ಕ್ರಮ ಕೈಗೊಳ್ಳದ ಅಧಿಕಾರಿಗಳ ವಿರುದ್ಧ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡ ಉಪಯೋಜನೆ ಕಾಯ್ದೆ 2013 ರಂತೆ ಹಾಗೂ ಪಿ.ಓ.ಎ. ಆಕ್ಟ್ ಸೆಕ್ಷನ್-3 ರಡಿ, ಶಿಸ್ತು ಕ್ರಮ ಕೈಗೊಳ್ಳಲಾಗುವುದು.

-----2

Scanned by CamScanner

Scanned with CamScanner

4) ಪ್ರತಿ ಮೂರು ತಿಂಗಳಿಗೊಮ್ಮೆ ಎಸ್.ಸಿ.ಎಸ್.ಪಿ. / ಟಿ.ಎಸ್.ಪಿ. ಯೋಜನೆಯ ಪ್ರಗತಿ ವರದಿಯನ್ನು ಸರ್ಕಾರಕ್ಕೆ ಸಲ್ಲಿಸತಕ್ಕದ್ದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

14/2/17

(ಪಿ.ಎಸ್. ನಾಗರಾಜ್)
ಸರ್ಕಾರದ ಅಧೀನ ಕಾರ್ಯದರ್ಶಿ-1 (ಪ್ರ).
ಸಮಾಜ ಕಲ್ಯಾಣ ಇಲಾಖೆ.

ಇವರಿಗೆ:-
1) ಮಹಾಲೇಖಪಾಲರು, (ಎ&ಇ) ಬೆಂಗಳೂರು
2) ಆಯುಕ್ತರು, ಸಮಾಜ ಕಲ್ಯಾಣ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು
3) ನಿರ್ದೇಶಕರು, ಪರಿಶಿಷ್ಟ ಪಂಗಡಗಳ ನಿರ್ದೇಶನಾಲಯ, ಬೆಂಗಳೂರು
4) ಎಲ್ಲಾ ಜಿಲ್ಲಾಧಿಕಾರಿಗಳು
5) ಎಲ್ಲಾ ಮುಖ್ಯಕಾರ್ಯನಿರ್ವಾಹಣಾಧಿಕಾರಿಗಳು, ಜಿಲ್ಲಾ ಪಂಚಾಯತ್
6) ಎಲ್ಲಾ ಜಂಟಿ / ಉಪ ನಿರ್ದೇಶಕರು, ಸಮಾಜ ಕಲ್ಯಾಣ ಇಲಾಖೆ

} ಆಯುಕ್ತರು, ಸಮಾಜ ಕಲ್ಯಾಣ ಇಲಾಖೆ ಇವರ ಮುಖಾಂತರ

7) ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು-03

ಪ್ರತಿಗಳು:
1) ಮಾನ್ಯ ಸಮಾಜ ಕಲ್ಯಾಣ ಮತ್ತು ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನ ಸೌಧ, ಬೆಂಗಳೂರು
2) ಸರ್ಕಾರದ ಕಾರ್ಯದರ್ಶಿ, ಸಮಾಜ ಕಲ್ಯಾಣ ಇಲಾಖೆ ರವರ ಆಪ್ತ ಕಾರ್ಯದರ್ಶಿ, ವಿಕಾಸ ಸೌಧ, ಬೆಂಗಳೂರು
3) ಸರ್ಕಾರದ ಉಪ ಕಾರ್ಯದರ್ಶಿಗಳು, ಸಮಾಜ ಕಲ್ಯಾಣ ಇಲಾಖೆ ರವರ ಆಪ್ತ ಸಹಾಯಕರು, ಬೆಂಗಳೂರು.

Scanned with CamScanner